64

ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/23/2016-17. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಚಂದ್ರಪ್ಪ ತಂದೆ ಪೂಜಾರ ಬೊಮ್ಮಪ್ಪ<br>2)ಸಣ್ಣ ಓಬಮ್ಮ ಗಂಡ ಲೇಟ್ ಬೋಯಾ ಅಡಿವೆಪ್ಪ<br>ಬೈರದೇವರಗುಡ್ಡ ಗ್ರಾಮ<br>ಕೂಡ್ಲಿಗಿ ತಾಲೂಕು | ಎ.ಮಾರಪ್ಪ ತಂದೆ ಲೇಟ್ .ಬಿ.ಅಡಿವೆಪ್ಪ<br>ಬೆಳೆದೇರಿ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 156/5. ವಿಸ್ತೀರ್ಣ 0-68. ಸೆಂಟ್ಸು ಜಮೀನನ್ನು ಕ್ರಯ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 156/5. ವಿಸ್ತೀರ್ಣ 0-68. ಸೆಂಟ್ಸು ಜಮೀನನ್ನು ಸದರಿ ತಾಲೂಕು ಬೈರದೇವರಗುಡ್ಡ ಗ್ರಾಮದ ಸಣ್ಣ ಓಬಮ್ಮ ಗಂಡ ಲೇಟ್ ಬೋಯಾ ಅಡಿವೆಪ್ಪ ಇವರಿಂದ ಸದರಿ ತಾಲೂಕು ಬೈರದೇವರಗುಡ್ಡ ಗ್ರಾಮದ ಚಂದ್ರಪ್ಪ ತಂದೆ ಪೂಜಾರ ಬೊಮ್ಮಪ್ಪ ಇವರು ದಿನಾಂಕ 02-04-2016 ರ ಡಾಕ್ಯುಮೆಂಟ್ ನಂಬರ್: 25/2016-17. ರ ಪ್ರಕಾರ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಉಜ್ಜನಿ ಇವರು ನಮೂನೆ-21 ನೋಟಿಸನ್ನು ದಿನಾಂಕ 06-04-2016 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಜಮೀನು ಮಾನ್ಯ ಸಹಾಯಕ ಆಯುಕ್ತರು ಹೊಸಪೇಟೆ ಇವರ ನ್ಯಾಯಾಲಯ ಸಂ/ಕಂ/ಪಹಣಿ:ಅಪೀಲು/243/2014-15. ರಲ್ಲಿ ಪ್ರಕರಣವು ವಿಚಾರಣೆ ಹಂತದಲ್ಲಿರುವುದರಿಂದ ಈ ಪ್ರಕರಣವನ್ನು ಎಂ.ಆರ್.ನಂಬರ್: 91/2015-16. ದಿನಾಂಕ 05-05-2016 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 14-06-2016 ರಿಂದ 21-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಉಜ್ಜನಿ ಗ್ರಾಮದ ಸನಂ 156/5. ವಿಸ್ತೀರ್ಣ 0-68. ಸೆಂಟ್ಸು ಜಮೀನನ್ನು ಸದರಿ ತಾಲೂಕು ಬೈರದೇವರಗುಡ್ಡ ಗ್ರಾಮದ ಸಣ್ಣ ಓಬಮ್ಮ ಗಂಡ ಲೇಟ್ ಬೋಯಾ ಅಡಿವೆಪ್ಪ ಇವರಿಂದ ದಿನಾಂಕ 02-04-2016 ರ ಡಾಕ್ಯುಮೆಂಟ್ ನಂಬರ್: 25/2016-17. ರ ಪ್ರಕಾರ ರೂ: 54.000/- ಗಳಿಗೆ ಖಂಡಿತ ಕ್ರಯಕ್ಕೆ ಖರೀದಿಸಿ ಕೂಡ್ಲಿಗಿಯ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿಸಿ ಕೊಂಡಿರುತ್ತೇನೆ. ಸದರಿ ಕ್ರಯ ಪತ್ರ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನು ಮಾನ್ಯ ಸಹಾಯಕ ಆಯುಕ್ತರು ಹೊಸಪೇಟೆ ಇವರ ನ್ಯಾಯಾಲಯ ಸಂ/ಕಂ/ಪಹಣಿ:ಅಪೀಲು/243/2014-15. ರಲ್ಲಿ ಪ್ರಕರಣ

ದಾಖಲಾಗಿ ವಿಚಾರಣೆ ಹಂತದಲ್ಲಿ ಇರುವ ಕಾರಣ ಸದರಿ ಕ್ರಯ ಪತ್ರ ಪ್ರಕಾರ ಕ್ರಯದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆ ಮತ್ತು ತಕರಾರುದಾರರ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ವಿವಾದವು ಮಾನ್ಯ ಸಹಾಯಕ ಆಯುಕ್ತರ ಹೊಸಪೇಟೆ ಇವರ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿ ವಿಚಾರಣೆ ಹಂತದಲ್ಲಿ ಇರುವ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## –:ಆದೇಶ:–

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಉಜ್ಜನಿ ಗ್ರಾಮದ ಸನಂ 156/5. ವಿಸ್ತೀರ್ಣ 0–68. ಸೆಂಟ್ಸು ಜಮೀನನ್ನು ಮಾನ್ಯ ಸಹಾಯಕ ಆಯುಕ್ತರು ಹೊಸಪೇಟೆ ಇವರ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿ ವಿಚಾರಣೆ ಹಂತದಲ್ಲಿ ಇರುವ ಕಾರಣ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸುತ್ತಾ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಚಂದ್ರಪ್ಪ ತಂದೆ ಬೊಮ್ಮಪ್ಪ. ಸಣ್ಣ ಓಬಮ್ಮ ಗಂಡ ಲೇಟ್ ಬೋಯಾ ಅಡಿವೆಪ್ಪ ಬೈರದೇವರಗುಡ್ಡ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಎ.ಮಾರಪ್ಪ ತಂದೆ ಲೇಟ್ ಬಿ.ಅಡಿವೆಪ್ಪ ಬೆಳೆದೇರಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.